DECEMBER 16, 2025
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಇಂದು ರಾಜ್ಯಕ್ಕೆ ಭೇಟಿ ನೀಡಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು: ಮಳವಳ್ಳಿಯಲ್ಲಿ ಶ್ರೀಶಿವರಾತ್ರಿ ಶಿವಯೋಗಿಗಳ ಜಯಂತಿ ಮಹೋತ್ಸವದಲ್ಲಿ ಭಾಗಿ.

- ಉತ್ತರ ಕರ್ನಾಟಕ ಸಮಸ್ಯೆಗಳ ಕುರಿತು ಚರ್ಚಿಸಲು ವಿಧಾನಮಂಡಲದ ಅಧಿವೇಶನ ಅವಧಿ ವಿಸ್ತರಿಸುವಂತೆ ವಿಪಕ್ಷ ನಾಯಕ ಆರ್.ಅಶೋಕ ಮನವಿ.

- ಸಂಸದರೊಂದಿಗೆ ರೈಲ್ವೆ ಸಚಿವರನ್ನು ಭೇಟಿ ಮಾಡಿದ ಸಚಿವ ಪ್ರಲ್ಹಾದ ಜೋಶಿ: ಉತ್ತರ ಕರ್ನಾಟಕಕ್ಕೆ ರೈಲ್ವೆ ಸೌಕರ್ಯ ಒದಗಿಸುವ ಕುರಿತು ಚರ್ಚೆ.

- ಇಂದು ದೇಶಾದ್ಯಂತ 'ವಿಜಯ್ ದಿವಸ್' ಆಚರಣೆ: ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗಕ್ಕೆ ಗೌರವ ಸಲ್ಲಿಕೆ.

ಈಗ ವಾರ್ತೆಗಳ ವಿವರ

*******

ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಜ್ಯಕ್ಕೆ ಭೇಟಿ ನೀಡಲಿದ್ದು, ಮಂಡ್ಯ ಜಿಲ್ಲೆ ಮಳವಳ್ಳಿಯಲ್ಲಿ ನಡೆಯುವ ಸುತ್ತೂರಿನ ಆದಿ ಜಗದ್ಗುರು ಶ್ರೀಶಿವರಾತ್ರಿ ಶಿವಯೋಗಿಗಳ 1066 ನೇ ಜಯಂತಿ ಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ನವದೆಹಲಿಯಿಂದ ಹೊರಟು ಮಧ್ಯಾಹ್ನ 2ಕ್ಕೆ ಮೈಸೂರಿನ ಮಂಡಕಹಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಲ್ಲಿಂದ ಹೆಲಿಕ್ಯಾಪ್ಟರ್ ಮೂಲಕ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಮಾರೇಹಳ್ಳಿ ಹೆಲಿಪ್ಯಾಡ್‌ಗೆ ಆಗಮಿಸಲಿದ್ದಾರೆ. ಏಳು ದಿನಗಳ ಕಾಲ ಮಳವಳ್ಳಿಯಲ್ಲಿ ಉತ್ಸವ ನಡೆಯಲಿದ್ದು, ಇಂದು ಮಧ್ಯಾಹ್ನ 3.15 ಕ್ಕೆ ಜಯಂತೋತ್ಸವಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ ನೀಡಲಿದ್ದಾರೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

*******

ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು ಒಂದು ವಾರ ವಿಸ್ತರಿಸುವಂತೆ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಮನವಿ ಮಾಡಿದ್ದಾರೆ. ಈ ಕುರಿತು ಸಭಾಧ್ಯಕ್ಷ ಯು.ಟಿ.ಖಾದರ ಅವರಿಗೆ ಪತ್ರ ಬರೆದಿರುವ ಅವರು, ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಸದಸ್ಯರು ಪ್ರಸ್ತಾಪ ಮಾಡಿರುವ ಹಲವು ಗಂಭೀರ ವಿ ಯಗಳಿಗೆ ಮುಖ್ಯಮಂತ್ರಿಗಳು ಮತ್ತು ಸಚಿವರು ಇನ್ನೂ ಉತ್ತರ ನೀಡಬೇಕಿದೆ. ಇದರ ಜೊತೆಗೆ ರಾಜ್ಯದಲ್ಲಿ ಕುಸಿದಿರುವ ಕಾನೂನು ಸುವ್ಯವಸ್ಥೆ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನುದಾನ ಬಳಕೆಯ ಕಳಪೆ ಸಾಧನೆ ಸೇರಿದಂತೆ ಅನೇಕ ವಿಚಾರಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಇನ್ನೂ ಸಾಕ ್ಟ ಸಮಯಾವಕಾಶದ ಅಗತ್ಯವಿದೆ ಎಂದು ಎಕ್ಸ್ ಮಾಧ್ಯಮದ ಮೂಲಕ ಮನವಿ ಮಾಡಿದ್ದಾರೆ.

*******

ಮೊಟ್ಟೆಯಲ್ಲಿ ಕ್ಯಾನ್ಸರ್‌ಕಾರಕ ಅಂಶಗಳು ಪತ್ತೆಯಾಗಿವೆ ಎಂಬ ಕುರಿತು ಜಾಲತಾಣಗಳಲ್ಲಿ ವದಂತಿ ಹಬ್ಬಿರುವ ಹಿನ್ನೆಲೆ, ರಾಜ್ಯಾದ್ಯಂತ ಮೊಟ್ಟೆಗಳ ಮಾದರಿಗಳನ್ನು ಸಂಗ್ರಹಿಸಿ, ಲ್ಯಾಬ್‌ಗಳಲ್ಲಿ ಪರೀಕ್ಷೆ ನಡೆಸುವಂತೆ ಸೂಚನೆ ನೀಡಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಒಂದು ವೇಳೆ ಪರೀಕ್ಷೆಯಲ್ಲಿ ಕ್ಯಾನ್ಸರ್‌ಕಾರಕ ಅಂಶಗಳು ಪತ್ತೆಯಾದರೆ, ಮೊಟ್ಟೆ ಉತ್ಪಾದಕರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಈ ಹಿಂದೆ ನಡೆಸಿದ ಪರೀಕ್ಷೆಗಳಲ್ಲಿ ಮೊಟ್ಟೆಗಳಲ್ಲಿ ಹಾನಿಕಾರಕ ಅಂಶಗಳು ಕಂಡುಬಂದಿರಲಿಲ್ಲ ಎಂದು ತಿಳಿಸಿದ್ದಾರೆ.

ಧ್ವನಿ–ದಿನೇಶ ಗುಂಡೂರಾವ್–27 ಸೆಕೆಂಡ್ಸ್

*******

ವಿಜಯಪುರ ಸಂಸದ ರಮೇಶ್ ಜಿಗಜಿಣಗಿ ಹಾಗೂ ಬಾಗಲಕೋಟೆ ಸಂಸದ ಪಿ.ಸಿ. ಗದ್ದಿಗೌಡರ್ ಅವರೊಂದಿಗೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈ ್ಣವ್ ಅವರನ್ನು ಭೇಟಿ ಮಾಡಿ, ಚರ್ಚಿಸಿದರು. ಉತ್ತರ ಕರ್ನಾಟಕದಲ್ಲಿ ಹೊಸ ರೈಲು ಮಾರ್ಗಗಳು, ಇತ್ತೀಚಿನ ಯೋಜನೆಗಳ ವೇಗವರ್ಧನೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಕುರಿತಂತೆ ವಿವರವಾಗಿ ಚರ್ಚಿಸಲಾಯಿತು. ಉತ್ತರ ಕರ್ನಾಟಕದ ಆರ್ಥಿಕ ಅಭಿವೃದ್ಧಿಗೆ ರೈಲ್ವೆ ಸಂಪರ್ಕ ಅತ್ಯಂತ ಪ್ರಮುಖವಾಗಿದ್ದು, ಜನಸಾಮಾನ್ಯರು, ರೈತರು ಹಾಗೂ ಕೈಗಾರಿಕಾ ವಲಯಕ್ಕೆ ಉತ್ತಮ ಸಂಪರ್ಕ ಒದಗಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಂಸದರು ಸಚಿವರ ಗಮನ ಸೆಳೆದರು.

*******

ನೈಋತ್ಯ ರೈಲ್ವೆ ತನ್ನ ವ್ಯಾಪ್ತಿಯಾದ್ಯಂತ ಟಿಕೆಟ್ ಪರಿಶೀಲನೆ ಮತ್ತು ನಿಯಮ ಜಾರಿ ಕಾರ್ಯಾಚರಣೆ ತೀವ್ರಗೊಳಿಸಿರುವ ಪರಿಣಾಮ, ಪ್ರಸಕ್ತ ಆರ್ಥಿಕ ವ ರ್ದಲ್ಲಿ ಟಿಕೆಟ್ ರಹಿತ ಮತ್ತು ಅಕ್ರಮ ಪ್ರಯಾಣ ಪ್ರಕರಣಗಳು ಗಣನೀಯವಾಗಿ ಪತ್ತೆಯಾಗಿದ್ದು, ಆದಾಯದಲ್ಲಿ ಭಾರೀ ಹೆಚ್ಚಳವಾಗಿದೆ. ಪ್ರಸಕ್ತ ಆರ್ಥಿಕ ವ ರ್ದ ನವೆಂಬರ್ ತಿಂಗಳಿನಲ್ಲಿ ಒಟ್ಟು 67,000 ಟಿಕೆಟ್ ತಪಾಸಣಾ ಪ್ರಕರಣಗಳನ್ನು

ದಾಖಲಿಸಿದ್ದು, ಇದರಿಂದ ಬರೋಬ್ಬರಿ 5.36 ಕೋಟಿ ರೂಪಾಯಿ ಆದಾಯ ಸಂಗ್ರಹವಾಗಿದೆ. ನಿರಂತರ ತಪಾಸಣೆ, ವಿಶೇ ' ತಪಾಸಣೆ ಮತ್ತು ರೈಲು ನಿಲ್ದಾಣಗಳಲ್ಲಿ ಹಾಗೂ ಪ್ರಯಾಣಿಸುವ ರೈಲುಗಳಲ್ಲಿ ಹಠಾತ್ ತಪಾಸಣೆ ನಡೆಸಿದ ಫಲಿತಾಂಶವೇ ಈ ಸುಧಾರಿತ ಸಾಧನೆಗೆ ಕಾರಣವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–52 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಇಂದು ದೇಶಾದ್ಯಂತ 'ವಿಜಯ್ ದಿವಸ್' ಎಂದು ಆಚರಿಸಲಾಗುತ್ತದೆ. 1971, ಡಿಸೆಂಬರ್ 16 ರಂದು ಭಾರತ, ಪಾಕಿಸ್ತಾನದ ವಿರುದ್ಧದ ಯುದ್ಧದಲ್ಲಿ ಗೆಲುವು ಸಾಧಿಸಿ ವಿಜಯದ ಕಹಳೆ ಊದಿತ್ತು. ಅಂದಿನಿಂದ ಈ ದಿನವನ್ನು ಇಡೀ ದೇಶವೇ ಹೆಮ್ಮೆಯ ದಿನವಾಗಿ ಸ್ಮರಿಸಲಾಗುತ್ತದೆ. ಈ ದಿನವು ಭಾರತೀಯ ಇತಿಹಾಸದಲ್ಲಿ ಅತ್ಯುನ್ನತ ಘಟ್ಟವಾಗಿದ್ದು, ದೇಶವು ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗಕ್ಕೆ ಗೌರವ ಸಲ್ಲಿಸುವ ಮೂಲಕ ವಿಜಯ ದಿವಸ್ ಅನ್ನು ಸಂಭ್ರಮಿಸುತ್ತದೆ. ಇದು ಯುದ್ಧದ ಸಮಯದಲ್ಲಿ ಭಾರತೀಯ ಸೈನಿಕರ ಶೌರ್ಯ ಮತ್ತು ತ್ಯಾಗದ ನೆನಪಿಗಾಗಿ ಆಚರಿಸುವ ಹೆಮ್ಮೆ ಮತ್ತು ಗೌರವದ ದಿನ. ಇಂದು ಬೆಳಿಗ್ಗೆ 9 ಗಂಟೆಗೆ ಬೆಂಗಳೂರಿನ ರಾಷ್ಟ್ರೀಯ ಸೈನಿಕ ಸ್ಮಾರಕ ದಲ್ಲಿ .ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ರಾಷ್ಟ್ರೀಯ ಸೈನಿಕ ಸ್ಮಾರಕ ಮ್ಯಾನೇಜ್‌ಮೆಂಟ್ ಟ್ರಸ್ಟ್ ವತಿಯಿಂದ "ವಿಜಯ ದಿವಸ" ಸ್ಮರಣ ಸಮಾರಂಭ ಆಯೋಜಿಸಲಾಗಿದೆ.

*******

ವಿಶೇಷಚೇತನರಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದ್ದು, ಅಂಥ ಸೌಲಭ್ಯಗಳು ಸಕಾಲದಲ್ಲಿ ಅವರಿಗೆ ದೊರೆಯುವಂತಾಗಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೀದರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಿದ್ದ "ಮಕ್ಕಳ ಸಂರಕ್ಷಣೆ" ಕುರಿತು ತಾಲ್ಲೂಕಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಹಾಗೂ ಗ್ರಾಮೀಣ ಮತ್ತು ನಗರ ಪುನರ್ವಸತಿ ಕಾರ್ಯಕರ್ತರಿಗೆ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದ ಕಟ್ಟ ಕಡೆಯ ವಿಶೇಷಚೇತನ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ದೊರೆಯಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳ ಹೆಚ್ಚು ಮುತುವರ್ಜಿಯಿಂದ ಕಾರ್ಯನಿರ್ವಹಿಸಬೇಕು. ವಿಶೇಷಚೇತನರಿಗೆ ಮೀಸಲಿಟ್ಟ ಅನುದಾನ ದುರ್ಬಳಕೆ ಆಗದಂತೆ ಎಚ್ಚರಿಕೆವಹಿಸಬೇಕು ಎಂದು ಸೂಚನೆ ನೀಡಿದರು.

*******

ಮೈಸೂರು ಜಿಲ್ಲೆಯಲ್ಲಿ ಈ–ಪೋತಿ ಖಾತೆ ಆಂದೋಲನ ಮುಂದುವರಿದಿದ್ದು, ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಆಂದೋಲನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ತಹಶೀಲ್ದಾರರ ನೇತೃತ್ವದಲ್ಲಿ ಪ್ರತಿಯೊಂದು ಗ್ರಾಮ ಮಟ್ಟದಲ್ಲಿ ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ತಾಲೂಕಿನ ವರುಣಾ ಹೋಬಳಿಗೆ ಸೇರಿದ ಹಾರೋಹಳ್ಳಿ ಮತ್ತು

ಮೆಳ್ಳಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಗ್ರಾಮ ಆಡಳಿತಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ರೈತರೊಂದಿಗೆ ಚರ್ಚೆ ನಡೆಸಿದರು. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ, ಸರ್ಕಾರದ ವತಿಯಿಂದ ರೂಪಿಸಿರುವ ಈ ಕಾರ್ಯಕ್ರಮವನ್ನು ಗರಿ ್ಠ ಪ್ರಮಾಣದಲ್ಲಿ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

*******

ಧಾರವಾಡದ ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ–ವಾಲ್ಮಿ ವತಿಯಿಂದ ನಾಳೆ ಬೆಳಿಗ್ಗೆ 11 ಗಂಟೆಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಜಲ ಸಂಪನ್ಮೂಲ ಇಲಾಖೆಯ ಅಭಿಯಂತರರ ಸಮ್ಮೇಳನ ಜಲ ಸಂಕಲ್ಪ –2025 ಆಯೋಜಿಸಲಾಗಿದೆ. ಜಲ ಸಂಪನ್ಮೂಲ ಸಚಿವರು ಹಾಗೂ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿ ್ತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇದೇ 21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪೋ ್ಕರು ತಮ್ಮ 5 ವ ್ಗದೊಳಗಿನ ಮಕ್ಕಳನ್ನು ಹತ್ತಿರದ ಪೊಲಿಯೋ ಬೂತ್‌ಗಳಿಗೆ ಕರೆದುಕೊಂಡು ಬಂದು ಉಚಿತ ಪೊಲಿಯೋ ಲಸಿಕೆಯನ್ನು ತಪ್ಪದೆ ಹಾಕಿಸಬೇಕು. ಪೋಲಿಯೋ ಲಸಿಕೆಯಿಂದ ಮಕ್ಕಳು ವಂಚಿತರಾಗದೆ ನೋಡಿಕೊಂಡು ಜಿಲ್ಲೆಯಲ್ಲಿ ಶೇಕಡ 100 ರ ್ಟ ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಇಂದು ರಾಜ್ಯಕ್ಕೆ ಭೇಟಿ ನೀಡಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು: ಮಳವಳ್ಳಿಯಲ್ಲಿ ಶ್ರೀಶಿವರಾತ್ರಿ ಶಿವಯೋಗಿಗಳ ಜಯಂತಿ ಮಹೋತ್ಸವದಲ್ಲಿ ಭಾಗಿ.

ಉತ್ತರ ಕರ್ನಾಟಕ ಸಮಸ್ಯೆಗಳ ಕುರಿತು ಚರ್ಚಿಸಲು ವಿಧಾನಮಂಡಲದ ಅಧಿವೇಶನ ಅವಧಿ ವಿಸ್ತರಿಸುವಂತೆ ವಿಪಕ್ಷ ನಾಯಕ ಆರ್.ಅಶೋಕ ಮನವಿ.

ಸಂಸದರೊಂದಿಗೆ ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿದ ಸಚಿವ ಪ್ರಲ್ಹಾದ ಜೋಶಿ: ಉತ್ತರ ಕರ್ನಾಟಕಕ್ಕೆ ರೈಲ್ವೆ ಸೌಕರ್ಯ ಒದಗಿಸುವ ಕುರಿತು ಚರ್ಚೆ.

ಇಂದು ದೇಶಾದ್ಯಂತ 'ವಿಜಯ್ ದಿವಸ್' ಆಚರಣೆ: ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗಕ್ಕೆ ಗೌರವ ಸಲ್ಲಿಕೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********